JUNE 13, 2025

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ರಾಜ್ಯದ ಕರಾವಳಿ ಹಾಗೂ ಮಲೆನಾಡು ಪ್ರದೇಶಗಳಲ್ಲಿ ಕಳೆದ 24 ಗಂಟೆಗಳಲ್ಲಿ ಭಾರಿ ಮಳೆಯಾಗಿದೆ. ಧಾರವಾಡ ಜಿಲ್ಲೆ ಕುಂದಗೋಳ ತಾಲೂಕಿನ ಹಂಚಿನಾಳ ಗ್ರಾಮದಲ್ಲಿ ಮಳೆ ಸಂಬಂಧಿ ದುರ್ಘಟಣೆಯಲ್ಲಿ, ಶಿವಯ್ಯ ಬಸಯ್ಯ ವಟ್ನಾಲಮಠ ಎಂಬುವರು ಮೃತಪಟ್ಟಿದ್ದಾರೆ. ಹುಬ್ಬಳ್ಳಿ ನೇಕಾರನಗರ ಸೇತುವೆ ಬಳಿ ಬೈಕ್ ನಲ್ಲಿ ಸಂಚರಿಸುತ್ತಿದ್ದ, ಹುಸೇನ ಸಾಬ ಕಳಸ ಎಂಬುವರು ನೀರಿನ ರಭಸಕ್ಕೆ ಸಿಲುಕಿ, ಕಣ್ಮರೆಯಾಗಿದ್ದಾರೆ. ಬ್ಯಾಹಟ್ಟಿ ಗ್ರಾಮ ಹಾಗೂ ಇಂಗಳ ಹಳ್ಳಿ ನಡುಗಡ್ಡೆಯಲ್ಲಿ ಸಿಲುಕಿದ್ದ ಕುರಿಗಾಹಿಗಳು ಹಾಗೂ 470 ಕುರಿಗಳನ್ನು ಅಗ್ನಿಶಾಮಕ ದಳದ ಸಹಾಯದಿಂದ ರಕ್ಷಿಸಲಾಗಿದೆ. ನಿರಂತರ ಮಳೆಗೆ ನವಲಗುಂದ ತಾಲೂಕಿನಲ್ಲಿ 23 ಮನೆಗಳಿಗೆ ಭಾಗಶಃ ಹಾನಿ ಸಂಭವಿಸಿದೆ, ಅಣ್ಣಿಗೇರಿಯಲ್ಲಿ 15 ಮನೆಗಳಿಗೆ ಹಾನಿಯಾಗಿದೆ. ಹುಬ್ಬಳ್ಳಿ ನಗರದಲ್ಲಿ 3 ಮನೆ, ಕುಂದಗೋಳದಲ್ಲಿ 2 ಮನೆಗಳು ಸೇರಿ ಒಟ್ಟು 45 ಮನೆಗಳು ಭಾಗಶಃ ಹಾನಿಗೊಳಗಾಗಿವೆ ಎಂದು ತಾಲೂಕು ತಹಶೀಲ್ದಾರರು ತಿಳಿಸಿದ್ದಾರೆ. ಶಿವಮೊಗ್ಗ ಜಿಲ್ಲೆ ತೀರ್ಥಹಳ್ಳಿ ತಾಲೂಕಿನ ಆಗುಂಬೆಯಲ್ಲಿ ಅತಿ ಹೆಚ್ಚು 11 ಸೆಂಟಿ ಮೀಟರ ಮಳೆಯಾಗಿದೆ. ದಕ್ಷಿಣ ಕನ್ನಡ ಜಿಲ್ಲೆ ಪುತ್ತೂರು ತಾಲೂಕಿನ ಪಟ್ಟೆ ಎಂಬಲ್ಲಿ ಸಿಡಿಲು ಬಡಿದು ಮನೆಗೆ ಹಾನಿಯಾಗಿದೆ. ರಾಯಚೂರು ಜಿಲ್ಲೆ, ದೇವದುರ್ಗ ತಾಲೂಕಿನ ಚಿಕ್ಕಹಳ್ಳ ಸತತ ಮಳೆ ಹಿನ್ನೆಲೆ ಉಕ್ಕಿ ಹರಿಯುತ್ತಿದೆ.**

<><><>

**ಸತತ ಮಳೆ ಹಿನ್ನೆಲೆ, ಉತ್ತರ ಕನ್ನಡ ಜಿಲ್ಲೆಯ ಸಂಭನೀಯ ಭೂಕುಸಿತ ಸ್ಥಳಗಳಲ್ಲಿ ವಾಹನ ನಿಲುಗಡೆ ನಿರ್ಬಂಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಲಕ್ಷ್ಮೀಪ್ರಿಯಾ ತಿಳಿಸಿದ್ದಾರೆ.**

<><><>

**ರೈತರು, ತಮ್ಮ ಬೆಳೆಗಳ ಸಮರ್ಪಕ ನಿರ್ವಹಣೆ ಮಾಡಿ, ಹೆಚ್ಚಿನ ಇಳುವರಿ ಪಡೆಯುವಂತಾಗಲು, ಕೃಷಿ ವಿಜ್ಞಾನಿಗಳ ಸಲಹೆಗಳು ಪೂರಕವಾಗಿವೆ ಎಂದು ರಾಯಚೂರು ಕೃಷಿ ವಿಶ್ವವಿದ್ಯಾಲಯದ ಆಡಳಿತ ಮಂಡಳಿ ಸದಸ್ಯ ಹಾಗೂ ಪ್ರಗತಿ ಪರ ರೈತ ತಿಮ್ಮಣ್ಣ ಚೌಡಿ ಹೇಳಿದ್ದಾರೆ. ಕೊಪ್ಪಳ ಜಿಲ್ಲೆ, ತಳಕಲ್ಲ ಗ್ರಾಮದಲ್ಲಿ ಜರುಗಿದ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಕಾರ್ಯಕ್ರಮಕ್ಕೆ, ಭಾರತೀಯ ತೋಟಗಾರಿಕೆ ಇಲಾಖೆ ವಿಜ್ಞಾನಿ ಡಾಕ್ಟರ ವಿ. ಭಾಸ್ಕರ ಅವರೊಂದಿಗೆ, ಸಸಿಗೆ ನೀರು ಉಣಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು.**

<><><>

**ಧ್ವನಿ: ತಿಮ್ಮಣ್ಣ ಚೌಡಿ 30 ಸೆಕೆಂದುಗಳು**

<><><>

ಹುಬ್ಬಳ್ಳಿ–ಅಂಕೋಲಾ ರೈಲು ಸಂಪರ್ಕ ಯೋಜನೆಗೆ, ರೇಲ್ವೆ ಇಲಾಖೆ, ಎಲ್ಲ ಪೂರ್ವ ಸಿದ್ಧತೆ ಕೈಗೊಳ್ಳಲಾಗಿದೆ ಎಂದು, ಕೇಂದ್ರದ ರೇಲ್ವೆ ಖಾತೆ ರಾಜ್ಯ ಸಚಿವ, ವಿ.ಸೋಮಣ್ಣ ಸ್ಪಷ್ಟ ಪಡಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ಮುಂಬರುವ ಎರಡು–ಮೂರು ತಿಂಗಳಲ್ಲಿ, ಯೋಜನೆಗೆ ಸ್ಪ ್ಟ ರೂಪ ಸಿಗಲಿದೆ. ಧಾರವಾಡ, ಬೆಳಗಾವಿ ಮಧ್ಯದ ರೈಲು ಯೋಜನೆ ಅನುಷ್ಠಾನಕ್ಕೆ, ಭೂ ಸ್ವಾಧೀನ ಪ್ರಕ್ರಿಯೆ ನಡೆದಿದೆ, ಎಂದರು. ಮಹಾದಾಯಿ ಹಾಗೂ ಕಳಸಾ, ಬಂಡೂರಿ ನಾಲಾ ಯೋಜನೆಗೆ, ವನ್ಯಜೀವಿ ಮಂಡಳಿ ಪರವಾನಿಗೆ ಬಾಕಿಯಿದೆ. ಪ್ರಯತ್ನಗಳು ಜಾರಿಯಲ್ಲಿವೆ, ಎಂದು ಸಚಿವ ಸೋಮಣ್ಣ ಹೇಳಿದರು.

<><><>

ಗಾನಯೋಗಿ ಲಿಂಗೈಕ್ಯ, ಪಂಡಿತ ಪಂಚಾಕ್ಷರಿ ಗವಾಯಿಗಳ 81 ನೇ ಪುಣ್ಯಸ್ಮರಣೆ ಹಾಗೂ ಪಂಡಿತ ಪುಟ್ಟರಾಜ ಕವಿ ಗವಾಯಿಗಳವರ 15 ನೇ ಪುಣ್ಯಸ್ಮರಣೆ ಹಿನ್ನೆಲೆ ಉಭಯ ಗುರುಗಳ ಜಾತ್ರಾ ಮಹೋತ್ಸವ ಅಂಗವಾಗಿ ಮಹಾರಥೋತ್ಸವವು, ಗದಗ, ಶ್ರೀ ವೀರೇಶ್ವರ ಪುಣ್ಯಾಶ್ರಮದಲ್ಲಿ 16 ನೇ ತಾರೀಖಿನಂದು ನಡೆಯಲಿದೆ. ಜಾತ್ರಾ ಮಹೋತ್ಸವದ ಅಂಗವಾಗಿ ಇಂದು ಸಂಜೆ 6 ಗಂಟೆಗೆ, ಕೀರ್ತನ ಸಮ್ಮೇಳನ ಹಾಗೂ ಅಂಧರಗೋಷ್ಠಿ ಜರುಗಲಿದೆ.

<><><>

ಅಹಮದಾಬಾದ್ ನಲ್ಲಿ ಸಂಭವಿಸಿದ, ಏರ್ ಇಂಡಿಯಾ ವಿಮಾನ 171, ದುರ್ಘಟನಾ ಸ್ಥಳಕ್ಕೆ, ಇಂದು ಬೆಳಗ್ಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಭೇಟಿ ನೀಡಿ ಪರಿಶೀಲಿಸಿ, ಅಧಿಕಾರಿಗಳಿಂದ ಮಾಹಿತಿ ಪಡೆದರು. ಬಳಿಕ ಅಹಮದಾಬಾದ್, ನಾಗರಿಕ ಆಸ್ಪತ್ರೆಗೆ ಭೇಟಿ ನೀಡಿದ ಅವರು, ದುರ್ಘಟನೆಯಲ್ಲಿ ಬದುಕುಳಿದ ಏಕೈಕ ಪ್ರಯಾಣಿಕ, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ವಿಶ್ವಾಸ್ ಅವರ ಆರೋಗ್ಯವನ್ನು ವಿಚಾರಿಸಿ, ಮಾತನಾಡಿಸಿದರು. ಇದೇ ಸಂದರ್ಭ ಆಸ್ಪತ್ರೆ ದಾಖಲಾಗಿರುವ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳ ಆರೋಗ್ಯ ಸ್ಥಿತಿಯನ್ನು ವಿಚಾರಿಸಿದರು. ಬಳಿಕ ವಿಮಾನಯಾನ ಸಚಿವರು, ಮುಖ್ಯಮಂತ್ರಿ ಸೇರಿದಂತೆ ವಿಮಾನ ನಿಲ್ದಾಣದ ಉನ್ನತ ಅಧಿಕಾರಗಳೊಂದಿಗೆ ಸಭೆ ನಡೆಸಿದರು.

<><><>

ಕೇಂದ್ರ ಪುರಸ್ಕೃತ, ಪ್ರಧಾನಮಂತ್ರಿ ವಿಶ್ವಕರ್ಮ ಯೋಜನೆ ಅಡಿ, ಚಿಕ್ಕಮಗಳೂರು ಜಿಲ್ಲೆಯಲ್ಲಿ, 18 ಕೋಟಿ 40 ಲಕ್ಷದ 59 ಸಾವಿರ ರೂಪಾಯಿ ಸಾಲವನ್ನು, ಸಾವಿರದ 7 ನೂರಾ 4 ಜನ ಫಲಾನುಭವಿಗಳ ಖಾತೆಗೆ, ಜಮೆ ಮಾಡಲಾಗಿದೆ ಎಂದು, ಉಡುಪಿ–ಚಿಕ್ಕಮಗಳೂರು ಸಂಸದ, ಕೋಟ ಶ್ರೀನಿವಾಸ ಪೂಜಾರಿ ತಿಳಿಸಿದ್ದಾರೆ. ನಗರಸಭೆ ಸಭಾಂಗಣದಲ್ಲಿ, ವಿಶ್ವಕರ್ಮ ಯೋಜನೆ ಅಡಿ, ಫಲಾನುಭವಿಗಳಿಗೆ ಟೂಲ್‌ಕಿಟ್ ವಿತರಿಸಿ, ಅವರು ಮಾತನಾಡಿದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.

<><><>